ಆ) ಹಾಗಿದ್ದಲ್ಲಿ, ಬಾಕಿ ಉಳಿದಿರುವ ಮೊಬಲಗು ಎಷ್ಟು;

ಇ) ಉಳಿದ ಅನುದಾನ ಬಿಡುಗಡೆಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಡಾ॥ ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ರಾಜ್ಯದಲ್ಲಿನ 6 ನೂತನ ವೈದ್ಯಕೀಯ ಕಾಲೇಜುಗಳ ಮೊದಲನೇ ಹಂತದ ಕಾಮಗಾರಿಗೆ ಇದುವರೆಗೆ ಒಟ್ಟು 90 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ.

2005–06ನೇ ಸಾಲಿನಲ್ಲಿ – ರೂ. 85 ಕೋಟಿ

2006–07ನೇ ಸಾಲಿನಲ್ಲಿ ಇಲ್ಲಿಯವರೆಗೆ – ರೂ.5 ಕೋಟಿ

ಕ್ರಮ ಸಂಖ್ಯೆ	ಕಾಲೇಜು	ಉಳಿದ ಹಣ
1	ಬೆಳಗಾಂ	3,32,66,968
2	ಮಂಡ್ಯ	2,00,00,000
3	ಶಿವಮೊಗ್ಗ	1,09,75,764
4	ಹಾಸನ	3,81,63,309
5	ಬೀದರ್	3,75,00,000
6	ರಾಯಚೂರು	5,00,00,000

ಆ) ಅಗತ್ಯವಿರುವ ಹಣವನ್ನು ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು.

1299(1588) ಶ್ರೀ ಅಂಜನಾಮೂರ್ತಿ (ನೆಲಮಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) 1 ರಿಂದ 7ನೇ ತರಗತಿವರೆವಿಗೆ ಓದುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮತ್ತು ಹೆಣ್ಣು ಮಕ್ಕಳ ಹಾಜರಾತಿ ವಿದ್ಯಾರ್ಥಿ ವೇತನವನ್ನು ಸರ್ಕಾರ ತಡೆ ಹಿಡಿಯಲಾಗಿದೆಯೇ;

ಆ) ಇದರಿಂದಾಗಿ ಬಡ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ತೊಂದರೆಗೊಳಗಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈಗಾಗಲೇ ಹೊರಡಿಸಲಾದ ಸರ್ಕಾರದ ಆದೇಶವನ್ನು ತಡೆ ಹಿಡಿದು ಮೊದಲಿನಂತೆ ವಿದ್ಯಾರ್ಥಿ ವೇತನವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಾಲಚಂದ್ರ ಲ. ಜಾರಕಿಹೂಳಿ (ಸಮಾಜ ಕಲ್ಯಾಣ ಸಚಿವರು) :

ಅ) 1 ರಿಂದ 7ನೇ ತರಗತಿವರೆಗಿನ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಮಂಜೂರಾತಿಗಾಗಿ ಪೂರಕ ಅಂದಾಜಿನಲ್ಲಿ ರೂ. 9.92

ಕೋಟಿಗಳನ್ನು ಒದಗಿಸಿದ್ದು, ದಿ: 27.06.2006ರಲ್ಲಿ ಎಲ್ಲಾ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲಾಗಿದೆ.

ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗೆ ಹಿಂದಿನ ಸಾಲಿನಂತೆಯೇ ವಿದ್ಯಾರ್ಥಿವೇತನ ನೀಡಲು ಕ್ರಮ ಕೈಗೊಳ್ಳಲಾಗಿದೆ. ಹೆಣ್ಣು ಮಕ್ಕಳ ಹಾಜರಾತಿ ವಿದ್ಯಾರ್ಥಿ ವೇತನ ನೀಡುವ ಯೋಜನೆ ಇರುವುದಿಲ್ಲ.

ಆ) ವಿದ್ಯಾರ್ಥಿವೇತನ ಪಾವತಿಸುವುದರಿಂದ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಯಾವುದೇ ತೊಂದರೆ ಇರುವುದಿಲ್ಲ.

ಇ) ವಿದ್ಯಾರ್ಥಿವೇತನ ತಡೆ ಹಿಡಿಯುವ ಬಗ್ಗೆ ಯಾವುದೇ ಆದೇಶ ಹೊರಡಿಸಿರುವುದಿಲ್ಲ ಸರ್ಕಾರವು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಅನುದಾನವನ್ನು ಒದಗಿಸಿಕೊಂಡಿದ್ದು, ಯೋಜನೆಯ ಅನುಷ್ಠಾನಕ್ಕಾಗಿ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳಿಗೆ ಹಂಚಿಕೆ ಮಾಡಲಾಗಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿಗಳನ್ನು ಸ್ವೀಕರಿಸಿ, ಮಂಜೂರಾತಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1300(1589) ಶ್ರೀ ಅಂಜನಾಮೂರ್ತಿ (ನೆಲಮಂಗಲ) : ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರಿಗೆ ನಿರ್ಮಿಸಲಾಗಿರುವ ವಸತಿ ಶಾಲೆಗಳೇಷ್ಟು;

ಆ) ಅವುಗಳಲ್ಲಿ ಬಾಡಿಗೆ ಹಾಗೂ ಸ್ವಂತ ಕಟ್ಟಡಗಳಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳೇಷ್ಟು;

ಇ) ಈ ವಸತಿ ನಿಲಯಗಳಿಗೆ ಇದುವರೆಗೂ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು. (ತಾಲ್ಲೂಕುವಾರು ಮಾಹಿತಿ ನೀಡುವುದು)?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ಇಲಾಖೆಯಿಂದ 22 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ.

ಆ) 19 ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. 3 ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ.

ಇ) ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆಗಳಿಗಾಗಿ ಜಿಲ್ಲಾ ವಲಯದಲ್ಲಿ ರೂ. 369.00 ಲಕ್ಷಗಳ ಆಯವ್ಯಯವನ್ನು ಒದಗಿಸಲಾಗಿದೆ.